ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **2075/2024**

ಪಿರ್ಯಾದಿ : ವಾಸುದೇವ ಹೆಚ್.ಜಿ., ವಯಸ್ಸು: 59 ವರ್ಷ,
ಬಿನ್ ಗಣಪತಿ ಗೌಡ, ವಾಸ: ಹೊರನಾಡು ರಸ್ತೆ,
ಕಳಸ ಅಂಚೆ, ಮೂಡಿಗೆರೆ ತಾಲ್ಲೂಕು.

ಈಗಿನ ವಾಸ: ಮಹರ್ಷಿ ವಾಲ್ಮಿಕಿ ಕಟ್ಟಡ,
1 ನೇ ಹಂತ, ಬೈಪಾಸ್ ರಸ್ತೆ,
ಕಲ್ಯಾಣನಗರ, ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ : ಸತ್ಯಪಾಲ್, ವಯಸ್ಸು: 53 ವರ್ಷ,
ಬಿನ್ ಬಿ.ಎ. ಕೃಷ್ಣೇಗೌಡ,
ವಾಸ: ಗಿರಿದರ್ಶಿನಿ, ಬಿಕನಹಳ್ಳಿ ರಸ್ತೆ,
ಐಡಿಎಸ್‌ಜಿ ಕಾಲೇಜಿನ ಎದುರು,
ಜ್ಯೋತಿ ನಗರ, ಚಿಕ್ಕಮಗಳೂರು ಜಿಲ್ಲೆ.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಳಿಗೊಸ್ಕರ ಪಿರ್ಯಾದುದಾರರಿಂದ ಕರಾರು ಒಪ್ಪಂದದ ಮುಖಾಂತರ 3,75,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಇಂಡಿಯನ್ ಓವರ್ ಸೀಸ್ ಬ್ಯಾಂಕ್, ಚಿಕ್ಕಮಗಳೂರು ಶಾಖೆಯ ಚೆಕ್ ಸಂಖ್ಯೆ: 262436, ದಿನಾಂಕ 03.08.2024, ರೂ.3,75,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕಳಸ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 18.09.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(ದಿನಾಂಕ 03.03.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

ಸಹಿ/-

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕ: 03.03.2025